ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ 487 ಗ್ರಾಪಂಅ 2017

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:29-08-2017

# ಸುತ್ತೋಲೆ

**ವಿಷಯ:** ನವೆಂಬರ್ ಮಾಹೆಯಲ್ಲಿ ಮಕ್ಕಳ ವಿಶೇಷ ಗ್ರಾಮಸಭೆಯನ್ನು ಹಮ್ಮಿಕೊಳ್ಳುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 367 ಗ್ರಾಪಂಅ 2006 ದಿ:18-09-2006.
2. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 108 ಗ್ರಾಪಂಅ 2007 ದಿ:30-10-2007.

********

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರತಿ ವರ್ಷ ನವೆಂಬರ್ ತಿಂಗಳಲ್ಲಿ ಮಕ್ಕಳ ಹಕ್ಕುಗಳ ದಿನಾಚರಣೆ ಹಮ್ಮಿಕೊಳ್ಳಲು ಮತ್ತು ಈ ತಿಂಗಳಲ್ಲಿ ಒಂದು ದಿನವನ್ನು ಮಕ್ಕಳ ವಿಶೇಷ ಗ್ರಾಮಸಭೆ ನಡೆಸಲು ಮೀಸಲಾಗಿಡಬೇಕೆಂದು ಉಲ್ಲೇಖಿತ ಸುತ್ತೋಲೆಗಳಲ್ಲಿ ಸವಿವರವಾಗಿ ವಿವರಿಸಲಾಗಿದೆ. ಮಕ್ಕಳ ವಿಶೇಷ ಗ್ರಾಮಸಭೆಗೆ ಸಂಬಂಧಿಸಿದಂತೆ ಈ ಕೆಳಕಂಡ ಮಾರ್ಗಸೂಚಿಗಳ ಕಡೆಗೆ ತಮ್ಮ ಗಮನ ಸೆಳೆಯಲಾಗಿದೆ.

ಮಕ್ಕಳ ಉಳಿವು, ರಕ್ಷಣೆ, ಅಭಿವೃದ್ಧಿ ಮತ್ತು ಭಾಗವಹಿಸುವಿಕೆಯ ಹಕ್ಕುಗಳನ್ನು ಜಾರಿಗೊಳಿಸುವಲ್ಲಿ ಸ್ಥಳೀಯ ಗ್ರಾಮ ಪಂಚಾಯತ್‌ಗಳ ಪಾತ್ರ ಮಹತ್ತರವಾಗಿದೆ. ಗ್ರಾಮ ಪಂಚಾಯಿತಿಗಳು ನಡೆಸುವ ಗ್ರಾಮಸಭೆಗಳಲ್ಲಿ ಮಕ್ಕಳ ಸ್ಥಿತಿಗತಿ, ಅವರುಗಳ ಅಭಿವೃದ್ಧಿ ಹಾಗೂ ಅವರುಗಳಿಗೆ ಸಂವಿಧಾನಾತ್ಮಕವಾಗಿ ಒದಗಿಸಿರುವ ಹಕ್ಕುಗಳ ಬಗ್ಗೆ ಗ್ರಾಮ ಪಂಚಾಯ್ತಿಗಳು ವಿಶೇಷವಾಗಿ ಚರ್ಚಿಸಿ ಗ್ರಾಮಸ್ಥರುಗಳಿಗೆ ಅವರುಗಳ ಜವಾಬ್ದಾರಿಯನ್ನು ತಿಳಿಸುವ ಗುರುತರ ಹೊಣೆಗಾರಿಕೆ ಗ್ರಾಮ ಪಂಚಾಯಿತಿಗಳ ಮೇಲಿರುತ್ತದೆ. ಆದ್ದರಿಂದ ನವೆಂಬರ್ ಮಾಹೆಯಲ್ಲಿ ವಿಶೇಷವಾಗಿ ಒಂದು ದಿನ ಮಕ್ಕಳ ಹಕ್ಕಿನ ಬಗ್ಗೆ ಗ್ರಾಮಸ್ಥರು, ಪೋಷಕರು, ವಿವಿಧ ಇಲಾಖೆಯ ಅಧಿಕಾರಿಗಳ ಮಕ್ಕಳ ಗ್ರಾಮಸಭೆಗಳನ್ನು ಏರ್ಪಡಿಸಬೇಕಾಗಿದೆ. ಈ ಗ್ರಾಮಸಭೆಯಲ್ಲಿ ವಿಶೇಷವಾಗಿ ಕೆಳಕಂಡ ಅಂಶಗಳನ್ನು ಚರ್ಚಿಸುವುದು.

1. ಮಕ್ಕಳ ಆರೋಗ್ಯಕರ ಬೆಳವಣಿಗೆಗೆ ಪೌಷ್ಟಿಕ ಆಹಾರವನ್ನು ಒದಗಿಸುವುದು.
2. ಮಕ್ಕಳ ಬೌದ್ಧಿಕ ಬೆಳವಣಿಗೆಗೆ ಆಟಪಾಠಗಳ ವ್ಯವಸ್ಥೆಯನ್ನು ವೈಜ್ಞಾನಿಕವಾಗಿ ರೂಪಿಸುವುದು.
3. ಪ್ರತಿ 3 ವರ್ಷದಿಂದ 6 ವರ್ಷದ ಎಲ್ಲಾ ಮಕ್ಕಳು ಅಂಗನವಾಡಿ ಹಾಗೂ ಶಾಲೆಗಳಲ್ಲಿ ದಾಖಲಾಗಿ ಶಿಕ್ಷಣವನ್ನು ಪ್ರಾರಂಭಿಸುವುದು.
4. ಜೀತ ಪದ್ಧತಿ ಹಾಗೂ ಕೃಷಿ ಕಾರ್ಮಿಕ ವೃತ್ತಿಯಲ್ಲಿ ಮಕ್ಕಳನ್ನು ತೊಡಗಿಸುವವರ ವಿರುದ್ಧ ಜಾಗೃತಿ ಮೂಡಿಸುವುದು.
5. ಹೆಣ್ಣುಮಕ್ಕಳ ಪೋಷಣೆ ಹಾಗೂ ರಕ್ಷಣೆ
6. ಮಕ್ಕಳ ಹಕ್ಕುಗಳ ಬಗ್ಗೆ ಅರಿವು ಮೂಡಿಸುವುದು.
7. ಮಕ್ಕಳ ಸಾಗಾಣಿಕೆ ನಿಷೇಧದ ಬಗ್ಗೆ ಅರಿವು ಮೂಡಿಸುವುದು.
8. ಬಾಲ್ಯ ವಿವಾಹ ನಿಷೇಧ ಕಾಯ್ದೆ ಹಾಗೂ ಇದರ ದುಷ್ಪರಿಣಾಮಗಳ ಬಗ್ಗೆ ಮಕ್ಕಳಿಗೆ ಅರಿವು ಮೂಡಿಸುವುದು.
9. ಮಕ್ಕಳ ಮೇಲೆ ನಡೆಯುವ ಲೈಂಗಿಕ ದೌರ್ಜನ್ಯ ಕುರಿತು ಜಾಗೃತಿ ಮೂಡಿಸುವುದು.

ಮೇಲ್ಕಂಡ ಅಂಶಗಳನ್ನಲ್ಲದೆ ಮಕ್ಕಳ ಪರವಾಗಿ ಸರ್ಕಾರ ಅನುಷ್ಠಾನಗೊಳಿಸುತ್ತಿರುವ ಯೋಜನೆ/ಕಾರ್ಯಕ್ರಮಗಳ ಬಗ್ಗೆ ವಿವರವಾಗಿ ಚರ್ಚಿಸಿ ಗ್ರಾಮಸ್ಥರು ಹಾಗೂ ಪೋಷಕರುಗಳಿಗೆ ಹೆಚ್ಚಿನ ತಿಳುವಳಿಕೆ ನೀಡುವ ಕಾರ್ಯಕ್ರಮವಾಗಿರಬೇಕು. ಈ ಮಕ್ಕಳ ವಿಶೇಷ ಗ್ರಾಮಸಭೆಗೆ ಆಯಾ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಕ್ಕಳು, ಪೋಷಕರು, ಅಂಗನವಾಡಿ ಕಾರ್ಯಕರ್ತೆಯರು, ಮೇಲ್ವಿಚಾರಕಿಯರು, ಆರೋಗ್ಯ ಇಲಾಖೆಯ ಸಿಬ್ಬಂದಿಗಳು, ಎಲ್ಲಾ ಶಾಲಾ ಶಿಕ್ಷಕರು, ಪೊಲೀಸ್ ಅಧಿಕಾರಿಗಳು, ಕಾರ್ಮಿಕ ಇಲಾಖೆ, ಪಂಚಾಯತ್ ರಾಜ್ ಇಲಾಖೆ, ಮಕ್ಕಳ ಕಲ್ಯಾಣ ಸಮಿತಿ, ಕರ್ನಾಟಕ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬಾಲನ್ಯಾಯ ಮಂಡಳಿ, ಎಲ್ಲಾ ತಾಲ್ಲೂಕು ಮತ್ತು ಗ್ರಾಮ ಪಂಚಾಯತ್ ಮಟ್ಟದ ಅಧಿಕಾರಿಗಳು, ಸ್ಥಳೀಯ ಸ್ವಯಂಸೇವಾ ಸಂಸ್ಥೆಗಳ ಪ್ರತಿನಿಧಿಗಳು ಕಡ್ಡಾಯವಾಗಿ ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಕ್ಕಳಲ್ಲಿ ಅರಿವು/ಜಾಗೃತಿಯನ್ನುಂಟು ಮಾಡಿ ಅವರನ್ನು ಸಮಾಜದ ಮುಖ್ಯವಾಹಿನಿಗೆ ತರುವಂತೆ ಕ್ರಮ ವಹಿಸುವುದು. ಗ್ರಾಮ ಪಂಚಾಯಿತಿಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಮಕ್ಕಳ ಅಂಕಿ ಸಂಖ್ಯೆ ಇನ್ನಿತರೆ ಮಾಹಿತಿಯನ್ನು ಕ್ರೋಢೀಕರಿಸುವುದು.

........2

ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ವೈಯಕ್ತಿಕ ಗಮನಹರಿಸಿ ಮಕ್ಕಳ ವಿಶೇಷ ಗ್ರಾಮಸಭೆಗಳನ್ನು ಕಡ್ಡಾಯವಾಗಿ ನವೆಂಬರ್ ಮಾಹೆಯಲ್ಲಿ ಹಮ್ಮಿಕೊಳ್ಳುವುದು ಮತ್ತು ತಾಲ್ಲೂಕು ಮಟ್ಟದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳು ಸಹ ಭಾಗವಹಿಸಲು ನಿರ್ದೇಶನ ನೀಡುವುದು. ಈ ಬಗ್ಗೆ ಸರ್ಕಾರಕ್ಕೆ ವರದಿಯನ್ನು ಸಲ್ಲಿಸುವಂತೆ ಸೂಚಿಸಲಾಗಿದೆ.

2016-17ನೇ ಸಾಲಿನಲ್ಲಿ ಮಕ್ಕಳ ವಿಶೇಷ ಗ್ರಾಮಸಭೆಯನ್ನು ಹಮ್ಮಿಕೊಂಡಿರುವ ಅಂಕಿಅಂಶಗಳ ಮಾಹಿತಿಯನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ರವರಿಗೆ ಸಲ್ಲಿಸುವುದು.

(ಜಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:
1) ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು
2) ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು-ಈ ಸುತ್ತೋಲೆಯ ಪ್ರತಿಯನ್ನು ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಿಗೆ ಕಳುಹಿಸಲು ಮತ್ತು ಮಕ್ಕಳ ವಿಶೇಷ ಗ್ರಾಮಸಭೆಯನ್ನು ಹಮ್ಮಿಕೊಂಡಿರುವ ಬಗ್ಗೆ ಜಿಲ್ಲಾ ಪಂಚಾಯಿತಿಗಳ ಮುಖಾಂತರ ಸರ್ಕಾರಕ್ಕೆ ವರದಿ ಕೊಡಲು ಸೂಚಿಸಲಾಗಿದೆ.

ಪ್ರತಿಯನ್ನು:
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.